**<u>ಪ್ರಧಾನ ಸಿವಿಲ್ ಮತ್ತು  ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿ.ಸಿ. ನಂ.274/2018**

| | | | |
|---|---|---|---|
| **ಹೆಸರು** | **:** | **ಸಂತೋಷ** | **ದೋ.ಸಾ. 2** |
| **ತಂದೆಯ ಹೆಸರು** | **:** | **ಶರಣಪ್ಪ** | **ಪ್ರಾ.ಸಾ. 3** |
| **ವಯಸ್ಸು** | **:** | **38 ವರ್ಷ** | **ದಿನಾಂಕಃ 19-12-2022** |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ಚಿಮ್ಮನಚೋಡ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಈ ಪ್ರಕರಣದ ಸಾಕ್ಷಿದಾರರಾದ ಚಾಸಾ-1 ಮತ್ತು 3 ಗೊತ್ತು

ಈಗ ನನಗೆ ತೋರಿಸಲಾದ ದಾಖಲೆಯಲ್ಲಿರುವ  ಸಹಿ ನನ್ನದೇ. ಸಾಕ್ಷಿ ನೋಡಿ ಗುರುತಿಸಿದ ದಾಖಲೆಯನ್ನು ಈಗಾಗಲೆ  ನಿಪಿ-6 ಎಂದು ಗುರುತಿಸಲಾಗಿದೆ. , ಸಾಕ್ಷಿಯ ಸಹಿಯನ್ನು ಈಗ ನಿಪಿ-6(ಬಿ)ಎಂದು ಗುರುತಿಸಲಾಯಿತು.

2015 ನೇ ಇಸ್ವಿಯಲ್ಲಿ ನಾನು ನನ್ನ ಸ್ವಂತ ಕೆಲಸದ ನಿಮಿತ್ತ ಚಿಂಚೋಳಿ ತಾಲೂಕ ಪಂಚಾಯತ ಕಛೇರಿಗೆ ಹೋಗಿದ್ದಾಗ ಅಲ್ಲಿದ್ದ ಪೊಲೀಸರು ನಿಪಿ-6 ರ ದಾಖಲೆಗೆ ನನ್ನ ಸಹಿ ಪಡೆದರು.  ಸದರಿ ದಾಖಲೆ ಬಗ್ಗೆ ನಾನು ವಿಚಾರಿಸಿದಾಗ ಪೊಲೀಸರು ತಾಲೂಕ ಕಛೇರಿಯಲ್ಲಿ ಅವ್ಯವಹಾರ ನಡೆದಿದ್ದು ಅದರ ಬಗ್ಗೆ ಪಚನಾಮೆ ಮಾಡಿದ್ದೇವೆ ಎಂದು ಹೇಳಿದರು.

ನಿಪಿ-6 ರ ದಾಖಲೆಯಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ. ಪೋಲೀಸರು ಅದನ್ನು ನನಗೆ ಓದಿ ಹೇಳಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ. ಪಂಚನಾಮೆನ್ನು ಪೊಲೀಸರು ಮೊದಲೆ ಬರೆದಿದ್ದರು. ಸದರಿ  ದಾಖಲೆ ನಾನು ಸಹಿ ಮಾಡಿದಾಗ ಸಮಯ ಅಂದಾಜು 4.00 ರಿಂದ 4.30 ಗಂಟೆ ಆಗಿತ್ತು.

(ಈ ಹಂತದಲ್ಲಿ ತನಿಖಾಧಿಕಾರಿಯವರು ಜರುಗಿಸಿದ ಪಂಚನಾಮೆಗೆ ಈ ಸಾಕ್ಷಿ ಭಾಗಶಃ  ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 21-01-2015 ರಂದು ನಾನು ಚಿಂಚೋಳಿ ತಾಲೂಕ ಕಛೇರಿಗೆ ಹೋಗಿದ್ದೆ ಎಂದರೆ ಸಾಕ್ಷಿ ದಿನಾಂಕ ನಿಖರವಾಗಿ ನೆನಪಿಲ್ಲ ಎಂದಿದ್ದಾರೆ. ನಿಪಿ-6 ರ ಪಂಚನಾಮೆನ್ನು ಪೊಲೀಸರು ನನ್ನ ಮುಂದೆಯೇ ಬರೆದು ನಂತರ ಸಹಿ ಪಡೆದರು ಎಂದರೆ ಸರಿಯಲ್ಲ. ನನ್ನ ಮುಂದೆಯೇ ಪಂಚನಾಮೆನ್ನು ಬರೆದಿದ್ದರು ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಎಸ.ಎಸ. ಎ. ವಕೀಲರಿಂದಃ</u>**

ದಿನಾಂಕಃ 21-01-2015 ರಂದು ನಾನು ಚಿಂಚೋಳಿ ತಾಲೂಕ ಪಂಚಾಯತ ಕಛೇರಿಗೆ ಹೋಗೆ ಇಲ್ಲ ಎನ್ನುವುದು ಸರಿಯಲ್ಲ. ನಿಪಿ-6 ದಾಖಲೆಗೆ ನಾನು ಪೊಲೀಸ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎನ್ನುವುದು ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**